File No.AGRI-AAE/65/2019-AGRI_PLAN_B-AGRICULTURE Secretariat

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019-20ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ "ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (RAD)" ಕಾರ್ಯಕ್ರಮಕ್ಕೆ 2015-16 ಮತ್ತು 2018-19ನೇ ಸಾಲುಗಳಲ್ಲಿ ವೆಚ್ಚವಾಗದೇ ಬಾಕಿ ಉಳಿದಿದ್ದ ಅನುದಾನವನ್ನು ಮರುಮೌಲ್ಯೀಕರಿಸಿ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019, ದಿನಾಂಕ: 02.04.2019.
2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 2-1/2018-RFS-III ದಿನಾಂಕ: 02.05.2019.
3. ದಿನಾಂಕ: 06.08.2019ರಂದು ನಡೆದ NMSA-RAD ಕಾರ್ಯಕ್ರಮದ ಯೋಜನಾ ಮಂಜೂರಾತಿ ಸಮಿತಿ ಸಭೆಯ ನಡವಳಿ.
4. ಸರ್ಕಾರದ ಆದೇಶ ಸಂಖ್ಯೆ: ಕೃಇ 57 ಕೃಉಇ 2019, ದಿನಾಂಕ: 31.08.2019.
5. ಸರ್ಕಾರದ ಆದೇಶ ಸಂಖ್ಯೆ: ಕೃಇ 55 ಕೃಉಇ 2019, ದಿನಾಂಕ: 31.08.2019.
6. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಪಿಎಲ್ಎನ್/ತಾಂ-1/NMSA-RAD/ 2019-20, ದಿನಾಂಕ: 04.09.2019.

*****

ಪ್ರಸ್ತಾವನೆ:

2019-20ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆ ಲೆಕ್ಕ ಶೀರ್ಷಿಕೆ: 2401-00-108-1-16 ಅಡಿ ಒಟ್ಟು ರೂ. 6065.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸುತ್ತಾ, "ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (RAD)" ಕಾರ್ಯಕ್ರಮಕ್ಕೆ ರೂ. 1451.16 ಲಕ್ಷಗಳ ಅನುದಾನವನ್ನು ಒದಗಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ "ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (RAD)" ಕಾರ್ಯಕ್ರಮದಡಿ ಹಿಂದಿನ ಸಾಲುಗಳಲ್ಲಿ ಬಿಡುಗಡೆಯಾಗಿ ವೆಚ್ಚವಾಗದೇ ಉಳಿಕೆಯಾಗಿದ್ದ ಅನುದಾನವನ್ನು ಮರುಮೌಲ್ಯೀಕರಿಸಿ 2019-20ನೇ ಸಾಲಿನಲ್ಲಿ ಬಳಕೆ ಮಾಡಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (3)ರ ದಿನಾಂಕ: 06.08.2019ರ NMSA-RAD ಕಾರ್ಯಕ್ರಮದ ಯೋಜನಾ ಮಂಜೂರಾತಿ ಸಮಿತಿ ಸಭೆಯಲ್ಲಿ, 2015-16ನೇ ಸಾಲಿನಲ್ಲಿ ಉಳಿಕೆಯಾಗಿದ್ದ, ರೂ. 4.91 ಲಕ್ಷಗಳನ್ನು ಹಾಗೂ 2018-19ನೇ ಸಾಲಿನಲ್ಲಿ ಉಳಿಕೆಯಾಗಿದ್ದ ರೂ. 75.29 ಲಕ್ಷಗಳನ್ನು ಸೇರಿಸಿ ಒಟ್ಟು ರೂ. 80.20 ಲಕ್ಷಗಳನ್ನು ಮರುಮೌಲ್ಯೀಕರಿಸಿ 2019-20ನೇ ಸಾಲಿನ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಅನುಮೋದನೆ ನೀಡಲಾಗಿದೆ.

.2..

ಮೇಲೆ ಓದಲಾದ (4)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ "ಮಣ್ಣು ಆರೋಗ್ಯ ಚೀಟಿ (SHC)" ಕಾರ್ಯಕ್ರಮದಡಿ 2018-19ನೇ ಸಾಲಿನಲ್ಲಿ ವೆಚ್ಚವಾಗದೇ ಉಳಿಕೆಯಾಗಿದ್ದ ರೂ. 706.283 ಲಕ್ಷಗಳನ್ನು ಹಾಗೂ "ಮಣ್ಣು ಆರೋಗ್ಯ ನಿರ್ವಹಣೆ (SHM)" ಕಾರ್ಯಕ್ರಮದಡಿ 2018-19ನೇ ಸಾಲಿನಲ್ಲಿ ವೆಚ್ಚವಾಗದೇ ಉಳಿಕೆಯಾಗಿದ್ದ, ರೂ. ರೂ. 277.956 ಲಕ್ಷಗಳನ್ನು ಸೇರಿಸಿ ಒಟ್ಟಾರೆ ರೂ. 984.239 ಲಕ್ಷಗಳನ್ನು ಬಿಡುಗಡೆ ಮಾಡಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

ಮೇಲೆ ಓದಲಾದ (5)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಪರಂಪರಾಗತ ಕೃಷಿ ವಿಕಾಸ ಯೋಜನೆ (PKVY) ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, 2017-18ನೇ ಹಾಗೂ 2018-19ನೇ ಸಾಲಿನಲ್ಲಿ ವೆಚ್ಚವಾಗದೇ ಉಳಿಕೆಯಾಗಿದ್ದ ಮರುಮೌಲ್ಯೀಕರಣಗೊಂಡ ರೂ. 707.39 ಲಕ್ಷಗಳನ್ನು ಬಿಡುಗಡೆ ಮಾಡಿ ಕಾರ್ಯಕ್ರಮವನ್ನು ತೋಟಗಾರಿಕೆ ಇಲಾಖೆಯ ಮುಖಾಂತರ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

ಮೇಲೆ ಓದಲಾದ (6)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ "ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (RAD)" ಕಾರ್ಯಕ್ರಮದಡಿ 2015-16ನೇ ಸಾಲಿನಲ್ಲಿ ವೆಚ್ಚವಾಗದೇ ಉಳಿಕೆಯಾಗಿದ್ದ ರೂ. 4.92 ಲಕ್ಷಗಳಿಗೆ ಅನುಗುಣವಾಗಿ ರಾಜ್ಯದ ಪಾಲಿನ ಅನುದಾನ ರೂ. 3.28 ಲಕ್ಷ ಹಾಗೂ 2019-20ನೇ ಸಾಲಿನಲ್ಲಿ ಉಳಿಕೆಯಾಗಿದ್ದ ರೂ. 80.21 ಲಕ್ಷಗಳಿಗೆ ಅನುಗುಣವಾಗಿ ರಾಜ್ಯದ ಪಾಲಿನ ಅನುದಾನ ರೂ. 50.21 ಲಕ್ಷಗಳನ್ನು ಸೇರಿಸಿ ಒಟ್ಟು ರೂ. 133.73ಲಕ್ಷಗಳನ್ನು ಈ ಕೆಳಕಂಡಂತೆ ಬಿಡುಗಡೆ ಮಾಡುವಂತೆ ಕೃಷಿ ಆಯುಕ್ತರು ಕೋರಿರುತ್ತಾರೆ.

(ರೂ. ಲಕ್ಷಗಳಲ್ಲಿ)

| ಉಪ ಶೀರ್ಷಿಕೆ | ಬಿಡುಗಡೆಯಾದ ವರ್ಷ | ಕೇಂದ್ರದ ಪಾಲಿನ ಅನುದಾನ | ರಾಜ್ಯದ ಪಾಲಿನ ಅನುದಾನ | ಒಟ್ಟು |
|---|---|---|---|---|
| 106 (ಸಾಮಾನ್ಯ) | 2018-19 | 37.80 | 25.21 | 63.04 |
| 422 (ವಿ.ಘ.ಉ. ಯೋ) | 2018-19 | 21.11 | 14.07 | 35.18 |
| 423 (ಗಿ.ಉ.ಯೋ) | 2015-16 | 4.92 | 3.28 | 8.20 |
| | 2018-19 | 16.38 | 10.92 | 27.31 |
| | ಒಟ್ಟು | 80.21 | 53.48 | 133.73 |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 65 ಕೃಕೈಉ 2019, ಬೆಂಗಳೂರು, ದಿನಾಂಕ: 12.09.2019.**

ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ "ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (RAD)" ಕಾರ್ಯಕ್ರಮದಡಿ 2015-16ನೇ ಸಾಲಿನಲ್ಲಿ ವೆಚ್ಚವಾಗದೇ ಉಳಿಕೆಯಾಗಿದ್ದ ರೂ. 4.91 ಲಕ್ಷಗಳಿಗೆ ರಾಜ್ಯದ ಪಾಲಿನ ಅನುದಾನ ರೂ. 3.28 ಲಕ್ಷಗಳನ್ನು (ಶೇ.40) ಸೇರಿಸಿ ರೂ. 8.19 ಲಕ್ಷಗಳನ್ನು ಹಾಗೂ 2018-19ನೇ ಸಾಲಿನಲ್ಲಿ ವೆಚ್ಚವಾಗದೇ ಉಳಿಕೆಯಾಗಿದ್ದ, ರೂ. 75.29 ಲಕ್ಷಗಳಿಗೆ ರಾಜ್ಯದ ಪಾಲಿನ ಅನುದಾನ ರೂ. 50.19 ಲಕ್ಷಗಳನ್ನು (ಶೇ.40) ಸೇರಿಸಿ ರೂ. 125.48 ಲಕ್ಷಗಳನ್ನು ಸೇರಿಸಿ ಒಟ್ಟಾರೆ ರೂ. **133.67 ಲಕ್ಷಗಳನ್ನು (ಒಂದು ನೂರ ಮೂವತ್ತ ಮೂರು ಲಕ್ಷದ ಅರವತ್ತೇಳು ಸಾವಿರ ರೂಪಾಯಿಗಳು ಮಾತ್ರ)**, 2019-20ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-108-1-16 ರಡಿ ಈ ಕೆಳಕಂಡಂತೆ ಬಿಡುಗಡೆ ಮಾಡುತ್ತಾ, ಸದರಿ ಅನುದಾನವನ್ನು ಘಟಕವಾರು ಮತ್ತು ವರ್ಗವಾರು ನಿಗಧಿತ ಹಂಚಿಕೆ ಮಾಡಿಕೊಂಡು ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

(ರೂ. ಲಕ್ಷಗಳಲ್ಲಿ)

| ಉಪ ಶೀರ್ಷಿಕೆ | ಬಿಡುಗಡೆಯಾದ ವರ್ಷ | ಕೇಂದ್ರದ ಪಾಲಿನ ಅನುದಾನ | ರಾಜ್ಯದ ಪಾಲಿನ ಅನುದಾನ | ಒಟ್ಟು |
|---|---|---|---|---|
| 106 (ಸಹಾಯಧನ) | 2018-19 | 37.80 | 25.20 | 63.00 |
| 422 (ಪ.ಜಾ.ಉ.ಯೋ.) | 2018-19 | 21.11 | 14.07 | 35.18 |
| 423 (ಪ.ಪಂ.ಉ.ಯೋ) | 2015-16 | 4.91 | 3.28 | 8.19 |
| | 2018-19 | 16.38 | 10.92 | 27.30 |
| ಒಟ್ಟು | | 80.20 | 53.47 | 133.67 |

ಸದರಿ ಬಿಡುಗಡೆ ಮಾಡಲಾದ ಅನುದಾನವನ್ನು ಕೃಷಿ ಇಲಾಖೆಯು ಜಲಾನಯನ ಅಭಿವೃದ್ಧಿ ಇಲಾಖೆಯ CCO ಗೆ ನೀಡಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅನುಮೋದಿಸಿದೆ.

ಕೃಷಿ ನಿರ್ದೇಶಕರು / ಜಲಾನಯನ ಅಭಿವೃದ್ಧಿ ಇಲಾಖೆಯ ನಿರ್ದೇಶಕರು ಕೇಂದ್ರ ಸರ್ಕಾರವು "National Mission on Sustainable Agriculture (NMSA)" ಯೋಜನೆಯಡಿಯ "ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (RAD)" ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

.4..

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ/01/ಟಿಎಫ್ ಪಿ/2019, ದಿನಾಂಕ: 03.04.2019ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 39 ಆಂ.ಆ.ಸ 2019 ದಿನಾಂಕ: 09.09.2019ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagaratnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)
12/09/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ.
7. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
8. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
15. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.